ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಬೆಂಗಳೂರು ನಗರ ಜಿಲ್ಲೆ, ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು -560 001.

ಸಂಖ್ಯೆ:ವಾಇ:ಉನಿ:ಬೆಂನಜಿ:2014-15 ದಿನಾಂಕ: 1-1-2015

**ಪತ್ರಿಕಾ ಪ್ರಕಟಣೆ**

## ವಿಶೇಷ ಎ.ಪಿ.ಎಂ.ಸಿ.ಗೆ ಚುನಾವಣೆ
## ಇಂದು ಬಹಿರಂಗ ಪ್ರಚಾರ ಅಂತ್ಯ

ಬೆಂಗಳೂರು, ಜ. 1

ಬೆಂಗಳೂರು ಹಣ್ಣು ಮತ್ತು ತರಕಾರಿಗಳ ವಿಶೇಷ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ನಡೆಯುವ ಚುನಾವಣಾ ಬಹಿರಂಗ ಪ್ರಚಾರವು ಜನವರಿ 2 ರಂದು ಸಂಜೆ 5 ಗಂಟೆಗೆ ಅಂತ್ಯಗೊಳ್ಳುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿ ಶ್ರೀ ವಿ.ಶಂಕರ್ ಅವರು ತಿಳಿಸಿದರು.

ಬೆಂಗಳೂರು ಹಣ್ಣು ಮತ್ತು ತರಕಾರಿಗಳ ವಿಶೇಷ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಜನವರಿ 4 ರಂದು ಬೆಳಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆವರೆಗೆ ಮತದಾನ ನಡೆಯಲಿದೆ. ಮತ ಎಣಿಕೆಯು ಜನವರಿ 8 ರಂದು ಬೆಳಗ್ಗೆ 8 ರಿಂದ ಆರ್.ಸಿ.ಕಾಲೇಜು, ಅರಮನೆ ರಸ್ತೆ, ಬೆಂಗಳೂರು ಇಲ್ಲಿ ನಡೆಯಲಿದೆ. ಒಟ್ಟು 12 ಕ್ಷೇತ್ರಗಳಿಗೆ ಮತದಾನ ನಡೆಯಲಿದ್ದು, ಒಟ್ಟು ಮತದಾರರು 157768, ಗಂಡಸರು 122406, ಹೆಂಗಸರು 35362 ಒಟ್ಟು ಮತಗಟ್ಟೆಗಳು 207 ಇವುಗಳಲ್ಲಿ ಸೂಕ್ಷ್ಮ 66, ಅತಿಸೂಕ್ಷ್ಮ 89 ಮತ್ತು ಸಾಮಾನ್ಯ 54 ಮತಗಟ್ಟೆಗಳು. 207 ಮತಗಟ್ಟೆಗಳಿಗೆ 828 ಸಿಬ್ಬಂದಿ ನೇಮಿಸಲಾಗಿದೆ. 12 ಕ್ಷೇತ್ರಗಳಿಗೆ 12 ಚುನಾವಣಾಧಿಕಾರಿಗಳು, 12 ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಲಾಗಿದೆ. ಒಟ್ಟು 30 ಬಸ್ಸುಗಳು, 40 ಜೀಪುಗಳನ್ನು ಚುನಾವಣಾ ಕಾರ್ಯಕ್ಕಾಗಿ ವ್ಯವಸ್ಥೆ ಮಾಡಲಾಗಿದೆ. ದಿನಾಂಕ: 3-1-2015 ರಂದು ಬೆಳಗ್ಗೆ 8 ಗಂಟೆಯಿಂದ ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಮಸ್ಟರಿಂಗ್ ನಡೆಯುತ್ತದೆ. ಜಮೀನು ಹೊಂದಿರುವ ರೈತರು ಖಾತೆದಾರರಾಗಿದ್ದು, ಮತ ಚಲಾಯಿಸುವ ಮತದಾರರಾಗಿರುತ್ತಾರೆ. ಇವರಿಗೆ ಭಾವಚಿತ್ರ ಇರುವ ಮತದಾರರ ಗುರುತಿನ ಚೀಟಿಯನ್ನು ನೀಡಲಾಗಿರುತ್ತದೆ. ಮತದಾನ ಮಾಡುವ ದಿನಾಂಕದಂದು ಗುರುತಿನ ಚೀಟಿ ಇಲ್ಲದ ಮತದಾರರು ಭಾವಚಿತ್ರ ಇರುವ 23 ಗುರತಿನ ಚೀಟಿಗಳಲ್ಲಿ ಯಾವುದಾದರೂ ಒಂದು ಗುರುತಿನ ಚೀಟಿಯನ್ನು ಮತಕಟ್ಟೆಯಲ್ಲಿ ತೋರಿಸಿ ಮತದಾನ ಮಾಡಬಹುದು. ಮತಗಟ್ಟೆಯಲ್ಲಿ ಚುನಾವಣಾ ಸಿಬ್ಬಂದಿ ಇರುತ್ತಾರೆ ಎಂದು ಅವರು ತಿಳಿಸಿದರು.

ಚುನಾವಣಾ ಪ್ರಕ್ರಿಯೆವು  ಜನವರಿ 10 ರಂದು ಮುಕ್ತಾಯಗೊಳ್ಳಲಿದೆ. ಇದುವರೆಗೆ ಯಾವುದೇ ಚುನಾವಣೆ ಘರ್ಷಣೆಗಳು ನಡೆದಿರುವುದಿಲ್ಲ. ಎಲ್ಲಾ 27 ಮತಗಟ್ಟೆಗಳಲ್ಲಿ ವಿಡಿಯೋ ಚಿತ್ರೀಕರಣ ಮಾಡಲಾಗುತ್ತದೆ. ಪ್ರತಿ ತಾಲ್ಲೂಕಿಗೆ ಜಿಲ್ಲಾಮಟ್ಟದ ನೋಡಲ್ ಅಧಿಕಾರಿಯನ್ನು ನೇಮಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಸಿಬ್ಬಂದಿಯನ್ನು ನೇಮಿಸಲಾಗಿದೆ. ಸಾರ್ವಜನಿಕರು ಚುನಾವಣೆಗೆ ಸಂಬಂಧಿಸಿದ ಯಾವುದೇ ಘಟನೆಗಳ ಬಗ್ಗೆ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 22240614 ಅಥವಾ ಆಯಾ ತಾಲ್ಲೂಕು ತಹಸೀಲ್ದಾರರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ವಿ.ಶಂಕರ್ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ವೆಂಕಟಾಚಲಪತಿ, ದಕ್ಷಿಣ ತಾಲ್ಲೂಕಿನ ಉಪವಿಭಾಗಾಧಿಕಾರಿ ನಾಗರಾಜು, ವಿಭಾಗಾಧಿಕಾರಿ ಎಲ್.ಸಿ.ನಾಗರಾಜು ಹಾಜರಿದ್ದರು.

ಉಪನಿರ್ದೇಶಕರು